**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 748/2022**

| | | | |
|---|---|---|---|
| **ಹೆಸರು** | **:** | **ಹಣಮಂತ** | **ದೋ.ಸಾ. 6** |
| **ತಂದೆಯ ಹೆಸರು** | **:** | **ಗೊಪಾಲ** | **ಪ್ರಾ.ಸಾ. 4** |
| **ವಯಸ್ಸು** | **:** | **19 ವರ್ಷ** | **ದಿನಾಂಕಃ 03-01-2023** |
| **ಉದ್ಯೋಗ** | **:** | **ನೀರು ಪೂರೈಸುವ ಕೆಲಸ** | |
| **ವಾಸಸ್ಥಳ** | **:** | **ಚಿಂಚೋಳಿ** | |

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಈ ಪ್ರಕರಣದ ಆರೋಪಿತರು ನನಗೆ ಗೊತ್ತಿಲ್ಲ.

ಅದೇ ರೀತಿ ಪ್ರಕರಣದ ಸಾಕ್ಷಿದಾರರಾದ ಚಾಸಾ-1, 5 ಮತ್ತು 7 ರಿಂದ 10 ನನಗೆ ಗೊತ್ತಿಲ್ಲ.

ನಾನು ಚಿಂಚೋಳಿ-ನಿಮಾಹೊಸ್ಸಳ್ಳಿ ಮಾರ್ಗ ಮಧ್ಯೆ ಮುಲ್ಲಾಮಾರಿ ನದಿಗೆ ಅಡ್ಡಲಾಗಿ ಕಟ್ಟುತ್ತಿರುವ ಸೇತುವೆಯಲ್ಲಿ ಕಾರ್ಮಿಕನಾಗಿ ಕೆಲಸ ಮಾಡಿಲ್ಲ. ಸದರಿ ಸೇತುವೆ ನಿರ್ಮಾಣದ ಸಮಯದಲ್ಲಿ ನನ್ನ ತಲೆಗೆ ಪೆಟ್ಟಾಗಿತ್ತು. ಯಾವ ಕಾರಣಕ್ಕೆ ಮತ್ತು ಯಾರ ತಪ್ಪಿನಿಂದ ನನಗೆ ಪೆಟ್ಟಾಯಿತು ಎಂದು ನನಗೆ ಗೊತ್ತಿಲ್ಲ. ನನ್ನ ತಲೆಯ ಮೇಲೆ ಏನು ಬಿದ್ದಿತ್ತು ಎಂದು ನನಗೆ ಗೊತ್ತಿಲ್ಲ. ನನಗೆ ಆಗಿದ್ದ ಗಾಯಕ್ಕೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದೇನೆ. ಯಾವ ಆಸ್ಪತ್ರೆ ಎಂದು ನನಗೆ ನೆನಪಿಲ್ಲ.

ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ.

ಪೋಲೀಸರು ಈ ಪ್ರಕಣದ ಸಂಬಂಧ ನನ್ನನ್ನು ವಿಚಾರಣೆ ಮಾಡಿರುವ ಮತ್ತು ನಾನು ಪೋಲೀಸರ ಮುಂದೆ ಹೇಳಿಕೆ ಕೊಟ್ಟ ಬಗ್ಗೆ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಕೊಟ್ಟಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 15-08-2021 ಕ್ಕೂ 3-4 ತಿಂಗಳ ಹಿಂದೆ ನಾನು ಚಿಂಚೋಳಿ-ನಿಮಾಹೊಸ್ಸಳ್ಳಿ ಮಾರ್ಗ ಮಧ್ಯೆ ಮುಲ್ಲಾಮಾರಿ ನದಿಗೆ ಅಡ್ಡಲಾಗಿ ಕಟ್ಟುತ್ತಿರುವ ಸೇತುವೆಯಲ್ಲಿ ಕಾರ್ಮಿಕನಾಗಿ

ಕೆಲಸಕ್ಕೆ ಹೋಗುತ್ತಿದ್ದೆ ಎನ್ನುವುದು ಸರಿಯಲ್ಲ.

ದಿನಾಂಕ 14-08-2021 ರಂದು ಸಂಜೆ 05-30 ಗಂಟೆಗೆ ಸೇತುವೆಗೆ ಅಳವಡಿಸಿದ್ದ ಅಡಿಪಾಯದ ಕಂಬಗಳು ಸೇತುವೆ ನಿರ್ಮಾಣದ ಮೇಲುಸ್ತುವಾರಿ ವಹಿಸಿದ್ದ ಆರೋಪಿತರ ನಿರ್ಲಕ್ಷ್ಯದಿಂದ ಮತ್ತು ಅವೈಜ್ಞಾನಿಕ ರೀತಿಯಲ್ಲಿ ಸ್ಲಾಬ್ ನಿರ್ಮಾಣ ಮಾಡಿದ್ದರಿಂದ ಸದರಿ ಸ್ಲಾಬ್ ಗಳು ಕಳಚಿ ಬಿದ್ದು ಅಲ್ಲಿ ಕೆಲಸ ಮಾಡುತ್ತಿದ್ದ ನನಗೆ ಮತ್ತು ಚಾಸಾ 1 ಹಾಗೂ 7 ರಿಂದ 10 ರವರ ಮೇಲೆ ಬಿದ್ದು ಗಾಯ ಆಯಿತು ಎನ್ನುವುದು ಸರಿಯಲ್ಲ. ಆರೋಪಿತರು ನನಗೆ ಮತ್ತು ಇತರೇ ಕಾರ್ಮಿಕರಿಗೆ ಯಾವುದೇ ಸುರಕ್ಷತಾ ಸಾಮಾಗ್ರಿಗಳನ್ನು ಕೊಡದೆ ಕೆಲಸ ಮಾಡಿಸುತ್ತಿದ್ದರು ಎನ್ನುವುದು ಸರಿಯಲ್ಲ. ಸದರಿ ಘಟನೆಯಲ್ಲಿ ನನ್ನ ತಲೆ, ಕೈ ಮತ್ತು ಕಾಲಿಗೆ ಗಂಭೀರ ಗಾಯವಾಗಿತ್ತು ಹಾಗೂ ಇತರಿರಿಗೂ ಮೈ ಕೈಗಳಿಗೆ ಗಾಯಗಳಾಗಿತ್ತು ಎನ್ನುವುದು ಸರಿಯಲ್ಲ. ಸ್ಥಳದಲ್ಲಿ ಕೆಲಸ ಮಾಡುತ್ತಿದ್ದ ಇತರರು ನಮ್ಮನ್ನು ಎಬ್ಬಿಸಿ ಅಂಬುಲೆನ್ಸನಲ್ಲಿ ಚಿಂಚೋಳಿ ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿತರ ನಿರ್ಲಕ್ಷ್ಯತನದಿಂದ ನಿರ್ಮಾಣ ಹಂತದಲ್ಲಿದ್ದ ಸೇತುವೆ ಬಿದ್ದು ನನಗೆ ಮತ್ತು ಇತರರಿಗೆ ಗಾಯಗಳಾಯಿತು ಎಂದು ನಾನು ದಿನಾಂಕ 30-08-2021 ರಂದು ಪೊಲೀಸರ ಮುಂದೆ ಈಗ ನನಗೆ ಓದಿ ಹೇಳಲಾದಂತೆ ನನ್ನ ಹೇಳಿಕೆ ಕೊಟ್ಟಿದ್ದೆ ಎನ್ನುವುದು ಸರಿಯಲ್ಲ.

ಸಾಕ್ಷಿ ಕೊಟ್ಟಿದ್ದಾರೆ ಎನ್ನಲಾದ ಹೇಳಿಕೆಯನ್ನು ಈಗ ನಿಪಿ-4 ಎಂದು ಗುರುತಿಸಲಾಯಿತು.

ನಿಪಿ-4 ರಂತೆ ಪೋಲೀಸರ ಮುಂದೆ ಹೇಳಿಕೆ ಕೊಟ್ಟಿದ್ದರೂ ಸಹ ಈಗ ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಸ್.ಎನ್.ಬಿ. ವಕೀಲರಿಂದಃ ಇಲ್ಲಾ**

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ.**